ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

18

ಇಲಾಖೆ / ವಿಷಯ : DEPARTMENT / SUBJECT: ಕೈಗಾರಿಕೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE 20/6/2020

## ಕೈಗಾರಿಕೆ ಸ್ಥಾಪನೆಗೆ ಇದ್ದ ಅಡ್ಡಿ ನಿವಾರಣೆಗೆ ಸುಗ್ರೀವಾಜ್ಞೆ: ಜಗದೀಶ ಶೆಟ್ಟರ್

# ಉದ್ಯಮಕ್ಕೆ ರಾಜಮಾರ್ಗ

ಪ್ರಜಾವಾಣಿ ವಾರ್ತೆ



- ಮೊದಲು ಉದ್ಯಮ, 3 ವರ್ಷಗಳ ಬಳಿಕ ಪರವಾನಗಿ
- ನಿಯಮಗಳು ಮತ್ತಷ್ಟು ಸರಳೀಕರಣ
- ಅರ್ಹ ಅರ್ಜಿಗಳಿಗೆ ತಕ್ಷಣ ಭೂಮಿ ಮಂಜೂರು



ಕೈಗಾರಿಕಾ ವ್ಯವಸ್ಥೆಯಲ್ಲಿ ಸಮಗ್ರ ಬದಲಾವಣೆ ತರುವ ಹಿನ್ನೆಲೆಯಲ್ಲಿ ಇದೊಂದು ಐತಿಹಾಸಿಕ ನಿರ್ಧಾರ. ಉದ್ಯಮಿಗಳಿಗೆ ಇದರಿಂದ ಅನುಕೂಲವಾಗುತ್ತದೆ

**ಜಗದೀಶ ಶೆಟ್ಟರ್**, ಸಚಿವ

**ಬೆಂಗಳೂರು:** ರಾಜ್ಯದಲ್ಲಿ ಕೈಗಾರಿಕೆ ಆರಂಭಿಸಲು ಇದ್ದ ಅಡ್ಡಿಗಳನ್ನು ನಿವಾರಿಸಿ, ಬಂಡವಾಳ ಹೂಡಲು ಮುಂದೆ ಬರುವ ಉದ್ಯಮಿಗಳಿಗೆ ಉತ್ತೇಜನ ನೀಡುವತ್ತ ರಾಜ್ಯ ಸರ್ಕಾರ ಮುಂದಡಿ ಇಟ್ಟಿದೆ.

ಗುರುವಾರ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬೃಹತ್ ಕೈಗಾರಿಕಾ ಸಚಿವ ಜಗದೀಶ ಶೆಟ್ಟರ್, ಈ ಕುರಿತು ವಿವರ ನೀಡಿದರು.

'ಕರ್ನಾಟಕ ಕೈಗಾರಿಕಾ ಸೌಲಭ್ಯಗಳ ಕಾಯ್ದೆ–2002'ಕ್ಕೆ ಸುಗ್ರೀವಾಜ್ಞೆ ಮೂಲಕ ತಿದ್ದುಪಡಿ ತರಲು ನಿರ್ಧರಿಸಲಾಗಿದೆ. ಇದರಿಂದ ಕೈಗಾರಿಕಾ ಘಟಕಗಳ ಸ್ಥಾಪನೆಗೆ ತಕ್ಷಣವೇ ಅನುಮತಿ ಸಿಗಲಿದೆ. ಎನ್‌ಒಸಿ, ಬಿಲ್ಡಿಂಗ್ ಪ್ಲಾನ್, ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಮಾಣಪತ್ರ, ಏಕಗವಾಕ್ಷಿ ಅನುಮತಿ, ಭೂಪರಿವರ್ತನೆ ಇತ್ಯಾದಿಗಳನ್ನು ಶೀಘ್ರವೇ ಮಾಡಿಕೊಡಲಾಗುವುದು' ಎಂದು ಅವರು ಹೇಳಿದರು.

'ಕರ್ನಾಟಕ ಉದ್ಯೋಗ ಮಿತ್ರದಡಿ ಅರ್ಜಿ ಸಲ್ಲಿಸಿದ ತಕ್ಷಣ ಜಿಲ್ಲಾ ಸಮಿತಿ ಮತ್ತು ರಾಜ್ಯಮಟ್ಟದ ಉನ್ನತಾಧಿಕಾರ ಸಮಿತಿಗಳು ಒಪ್ಪಿಗೆ ನೀಡಿ ದೃಢೀಕರಿಸಬೇಕು. ಲ್ಯಾಂಡ್ ಆಡಿಟ್ ಸಮಿತಿಯು ಕೈಗಾರಿಕೆ ಸ್ಥಾಪನೆಗಾಗಿ ಅರ್ಜಿದಾರ ನಮೂದಿಸಿದ ಜಮೀನಿನ ಮಾಹಿತಿ ತರಿಸಿಕೊಂಡು ಪರಿಶೀಲಿಸುತ್ತದೆ. ಇವೆಲ್ಲದರ ಪರಿಶೀಲನೆ ಮುಗಿಸಿ ಒಪ್ಪಿಗೆ ನೀಡಿದ ತಕ್ಷಣವೇ ಉದ್ಯಮಿ ಕೈಗಾರಿಕೆ ಸ್ಥಾಪನೆಗೆ ಚಾಲನೆ ನೀಡಬಹುದು' ಎಂದು ಶೆಟ್ಟರ್ ವಿವರಿಸಿದರು.

ಮುಖ್ಯವಾಗಿ, ಕೈಗಾರಿಕಾ ಘಟಕದ ಕಟ್ಟಡ ನಿರ್ಮಾಣ, ಯಂತ್ರೋಪಕರಣ ಸ್ಥಾಪನೆ ಇತ್ಯಾದಿ ಕೆಲಸಗಳನ್ನು ಮುಗಿಸಿಕೊಳ್ಳಬಹುದು. ಕೈಗಾರಿಕೆ ಸ್ಥಾಪನೆಗೆ ಮೊದಲೇ ಪಡೆಯಬೇಕಾಗಿದ್ದ ಪರಿಸರ ಅನುಮತಿ ಸೇರಿದಂತೆ ವಿವಿಧ ಬಗೆಯ ಪ್ರಮಾಣಪತ್ರಗಳು ಸಿಗುವ ತನಕ ಕಾಯಬೇಕಿಲ್ಲ. ಇವುಗಳನ್ನು ಮೂರು ವರ್ಷಗಳೊಳಗೆ ಪಡೆದರೆ ಸಾಕು ಎಂದರು.

'ಇಂತಹದ್ದೊಂದು ನಿಯಮ ಗುಜರಾತ್ ಮತ್ತು ರಾಜಸ್ಥಾನದಲ್ಲಿ ಇದೆ. ಅಲ್ಲಿ ಸಣ್ಣ ಉದ್ಯಮಗಳಿಗೆ ಮಾತ್ರ ಅನ್ವಯವಾಗುತ್ತದೆ. ನಮ್ಮಲ್ಲಿ ಎಲ್ಲ ಬಗೆಯ ಉದ್ಯಮಗಳಿಗೂ ಇದು ಅನ್ವಯವಾಗುತ್ತದೆ' ಎಂದು ಅವರು ಹೇಳಿದರು.

**ಮುದ್ರಾಂಕದಿಂದ ವಿನಾಯಿತಿ:** 'ರಾಜ್ಯದಲ್ಲಿ ವಿದ್ಯುತ್ ಚಾಲಿತ ವಾಹನಗಳ ತಯಾರಿಕೆಗೆ ಬಂಡವಾಳ ಹೂಡುವವರಿಗೆ ಶೇ 100 ರಷ್ಟು ಮುದ್ರಾಂಕ ಶುಲ್ಕದ ವಿನಾಯಿತಿ ನೀಡಲು ತೀರ್ಮಾನಿಸಿದೆ. ರಾಜ್ಯದಲ್ಲಿ ವಿದ್ಯುತ್ ಚಾಲಿತ ವಾಹನಗಳ ತಯಾರಿಕೆಗೆ ಹೆಚ್ಚಿನ ಒತ್ತು ನೀಡಲು ಉದ್ದೇಶಿಸಲಾಗಿದೆ' ಎಂದು ಅವರು ತಿಳಿಸಿದರು.